# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1) | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1448 |
| 2) | ಸದಸ್ಯರ ಹೆಸರು | : | ಶ್ರೀ ಎಂ.ಎ.ಗೋಪಾಲಸ್ವಾಮಿ |
| 3) | ಉತ್ತರಿಸಬೇಕಾದ ದಿನಾಂಕ | : | 19.03.2020 |
| 4) | ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಾಸನ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯೋಜನೆಯ ಸಂಪೂರ್ಣ ಮಾಹಿತಿ ನೀಡುವುದು; | ಹಾಸನ ವಿಮಾನ ನಿಲ್ದಾಣ ನಿರ್ಮಾಣ ಕಾರ್ಯವು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ವಿಮಾನ ನಿಲ್ದಾಣದ ಅಭಿವೃದ್ಧಿಗಾಗಿ ಈಗಾಗಲೇ 536 ಎಕರೆ ಜಮೀನನ್ನು ಹಾಸನ ಜಿಲ್ಲೆಯ ಭುವನಹಳ್ಳಿ ಗ್ರಾಮದಲ್ಲಿ ಸ್ವಾಧೀನ ಪಡಿಸಿಕೊಳ್ಳಲಾಗಿದೆ. |
| ಆ) | ಇದುವರೆವಿಗೂ ಪೂರ್ಣಗೊಂಡಿರುವ ಹಾಗೂ ಇನ್ನೂ ಬಾಕಿ ಇರುವ ಕಾಮಗಾರಿಗಳು ಯಾವುವು; (ವಿವರ ನೀಡುವುದು) | ಹಾಸನ ಜಿಲ್ಲೆಯ ಭೂವನಹಳ್ಳಿ ಗ್ರಾಮದಲ್ಲಿ ವಿಮಾನ ನಿಲ್ದಾಣ ಅಭಿವೃದ್ಧಿಗಾಗಿ ಈಗಾಗಲೇ 536 ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಸದರಿ ಜಮೀನನ್ನು 2007ರ ಒಪ್ಪಂದದನ್ವಯ ಅಭಿವೃದ್ಧಿದಾರರಾದ ಮೆ: ಜುಪಿಟರ್ ಏವಿಯೇಷನ್ ಗೆ ವಹಿಸಲಾಗಿದ್ದು, ಸದರಿ ಅಭಿವೃದ್ಧಿದಾರರು ಕಾರ್ಯವನ್ನು ಪ್ರಾರಂಭಿಸಿಲ್ಲವಾದ್ದರಿಂದ 2019ರ ಏಪ್ರಿಲ್ ನಲ್ಲಿ ಒಪ್ಪಂದವನ್ನು ರದ್ದುಗೊಳಿಸಿ ಮೆ:ರೈಟ್ಸ್ ಸಂಸ್ಥೆಯನ್ನು ಹಾಸನ ವಿಮಾನ ನಿಲ್ದಾಣದಸಲಹೆಗಾರರನ್ನಾಗಿ ನೇಮಿಸಲಾಗಿ ಪ್ರಸ್ತುತ ಮೆ:ರೈಟ್ಸ್ ಸಂಸ್ಥೆಯವರಿಂದ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುತ್ತಿದೆ. |
| ಇ) | ವಿಮಾನ ನಿಲ್ದಾಣದ ಒಟ್ಟು ವೆಚ್ಚ ಎಷ್ಟು; ಇದುವರೆವಿಗೂ ಖರ್ಚಾಗಿರುವ ಹಣ ಎಷ್ಟು; ಯಾವ ಕಾಲಮಿತಿಯೊಳಗೆ ಈ ಕಾಮಗಾರಿ ಪೂರ್ಣಗೊಂಡು ವಿಮಾನ ಹಾರಾಟ ಪ್ರಾರಂಭಿಸಲಾಗುವುದು? (ಸಮಗ್ರ ಮಾಹಿತಿ ನೀಡುವುದು) | ಹಾಸನ ವಿಮಾನ ನಿಲ್ದಾಣವನ್ನು ಈಗಾಗಲೇ ಕಲಬುರಗಿ ವಿಮಾನ ನಿಲ್ದಾಣದ ಅಭಿವೃದ್ಧಿಯನ್ನು ಕೈಗೊಂಡಿರುವ ಮಾದರಿಯಲ್ಲಿಯೇ ರೂ.175 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಗೊಳಿಸಲು ಉದ್ದೇಶಿಸಲಾಗಿ ಪ್ರಸ್ತುತ 536 ಎಕರೆ ಜಮೀನನ್ನು ರೂ 34.00 ಕೋಟಿಗಳ ವೆಚ್ಚದಲ್ಲಿ ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಪ್ರಸ್ತುತ ಮೆ; ರೈಟ್ಸ್ ಸಂಸ್ಥೆಯಿಂದ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಲಾಗುತ್ತಿದೆ. ಯೋಜನಾ ವರದಿಯು ತಯಾರಾದ ನಂತರದಲ್ಲಿ ವಿಮಾನ ನಿಲ್ದಾಣ ಅಭಿವೃದ್ಧಿ ಕಾಮಗಾರಿಯನ್ನು ನಿಯಮಾನುಸಾರ ಕೈಗೊಳ್ಳಲು ಕ್ರಮ ವಹಿಸಲಾಗುವುದು. |

ಸಂಖ್ಯೆ: ಮೂಅಇ 62 ರಾಅವಿ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ